ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 16 ]
Total No. of Printed Pages : 16 ]
ಒಟ್ಟು ಪ್ರಶ್ನೆಗಳ ಸಂಖ್ಯೆ : 48 ]
Total No. of Questions : 48 ]

**ಸಂಕೇತ ಸಂಖ್ಯೆ : 83-K**

**Code No. : 83-K**

# C

**CCE PR**
**NSR & NSPR**

Question Paper Serial No. **100**

# ವಿಷಯ : ವಿಜ್ಞಾನ

# Subject : SCIENCE

**(ಭೌತ ವಿಜ್ಞಾನ, ರಸಾಯನ ವಿಜ್ಞಾನ ಮತ್ತು ಜೀವ ವಿಜ್ಞಾನ / Physics, Chemistry & Biology)**

**(ಕನ್ನಡ ಮಾಧ್ಯಮ / Kannada Medium)**

**(ಪುನರಾವರ್ತಿತ ಖಾಸಗಿ ಅಭ್ಯರ್ಥಿ / ಎನ್.ಎಸ್.ಆರ್. & ಎನ್.ಎಸ್.ಪಿ.ಆರ್.)**

**(Private Repeater / NSR & NSPR)**

ದಿನಾಂಕ : 27. 06. 2022 ] [ Date : 27. 06. 2022

ಸಮಯ : ಬೆಳಗ್ಗೆ 10-30 ರಿಂದ ಮಧ್ಯಾಹ್ನ 1-45 ರವರೆಗೆ ] [ Time : 10-30 A.M. to 1-45 P.M.

ಗರಿಷ್ಠ ಅಂಕಗಳು : 100 ] [ Max. Marks : 100

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯಲ್ಲಿ ***ಭಾಗ-A : ಭೌತ ವಿಜ್ಞಾನ, ಭಾಗ-B : ರಸಾಯನ ವಿಜ್ಞಾನ, ಭಾಗ-C : ಜೀವ ವಿಜ್ಞಾನ*** ಎಂಬ ಮೂರು ಭಾಗಗಳಿವೆ.
2. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಒಟ್ಟು 48 ಪ್ರಶ್ನೆಗಳನ್ನು ಹೊಂದಿದೆ.
3. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
4. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
5. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
6. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

ಇಲ್ಲಿಂದ ಕತ್ತರಿಸಿ

**TEAR HERE TO OPEN THE QUESTION PAPER**
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

**Tear here**

## ಭಾಗ – A

## ( ಭೌತ ವಿಜ್ಞಾನ )

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಪರ್ಯಾಯ ಉತ್ತರಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಒಂದು ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಡನೆ ಪೂರ್ಣ ಉತ್ತರವನ್ನು ಬರೆಯಿರಿ : 2 × 1 = 2**

1. ಈ ಕೆಳಗಿನವುಗಳಲ್ಲಿ ನಿಮ್ನ ಮಸೂರಕ್ಕೆ ಸಂಬಂಧಿಸಿದಂತೆ ಸರಿಯಾದ ಹೇಳಿಕೆ

   (A) ಬೆಳಕಿನ ಕಿರಣಗಳನ್ನು ಕೇಂದ್ರೀಕರಿಸುತ್ತದೆ

   (B) ಬೆಳಕಿನ ಕಿರಣಗಳನ್ನು ವಿಕೇಂದ್ರೀಕರಿಸುತ್ತದೆ

   (C) ತಲೆಕೆಳಗಾದ ಪ್ರತಿಬಿಂಬವನ್ನು ಉಂಟುಮಾಡುತ್ತದೆ

   (D) ಸತ್ಯಪ್ರತಿಬಿಂಬವನ್ನು ಉಂಟುಮಾಡುತ್ತದೆ

2. ರೋಧಶೀಲತೆಯ SI ಏಕಮಾನ

   (A) ಓಮ್

   (B) ವೋಲ್ಟ್

   (C) ವ್ಯಾಟ್

   (D) ಓಮ್–ಮೀಟರ್

**II. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **3 × 1 = 3**

3. ಸಂಗಮದೂರ + 0·5 m ಇರುವ ಒಂದು ಪೀನ ಮಸೂರದ ಸಾಮರ್ಥ್ಯವನ್ನು ಕಂಡುಹಿಡಿಯಿರಿ.

4. ಒಂದು ವಿದ್ಯುತ್ ಮಂಡಲದಲ್ಲಿ ಓವರ್ ಲೋಡ್ ಉಂಟಾಗಲು ಕಾರಣಗಳೇನು ?

5. ಸೌರಕೋಶ ಎಂದರೇನು ?

**III. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **6 × 2 = 12**

6. ವಿದ್ಯುತ್‌ಮಂಡಲದಲ್ಲಿ 50 Ω ರೋಧವಿರುವ ಒಂದು ವಿದ್ಯುತ್ ಬಲ್ಬ್ ಅನ್ನು 10 V ಬ್ಯಾಟರಿಗೆ ಸಂಪರ್ಕಗೊಳಿಸಲಾಗಿದೆ. ವಿದ್ಯುತ್ ಬಲ್ಬ್‌ನ ಮೂಲಕ ಹರಿಯುವ ವಿದ್ಯುತ್‌ಪ್ರವಾಹ ಮತ್ತು ಬಲ್ಬ್‌ನ ವಿದ್ಯುತ್ ಸಾಮರ್ಥ್ಯವನ್ನು ಕಂಡುಹಿಡಿಯಿರಿ.

7. ಸರಳ ವಿದ್ಯುತ್ ಮೋಟಾರಿನ ಚಿತ್ರವನ್ನು ಬರೆದು, ಒಡಕು ಉಂಗುರಗಳನ್ನು ಗುರುತಿಸಿ.

8. ಪವನ ಶಕ್ತಿಯಿಂದ ವಿದ್ಯುತ್‌ಶಕ್ತಿಯನ್ನು ಉತ್ಪಾದಿಸುವಲ್ಲಿ ಇರುವ ಯಾವುದಾದರೂ ಎರಡು ಮಿತಿಗಳನ್ನು ಬರೆಯಿರಿ.

9. ಫ್ಲೆಮಿಂಗ್‌ನ ಬಲಗೈ ನಿಯಮವನ್ನು ನಿರೂಪಿಸಿ.

10. ಮೂರು ರೋಧಕಗಳನ್ನು ಒಂದು ವಿದ್ಯುತ್‌ಮಂಡಲದಲ್ಲಿ ಸಮಾಂತರವಾಗಿ ಜೋಡಿಸಿರುವುದನ್ನು ತೋರಿಸುವ ಚಿತ್ರವನ್ನು ಬರೆದು, ವೋಲ್ಟ್ ಮೀಟರ್ ಅನ್ನು ಗುರುತಿಸಿ.

11. ಪೀನ ದರ್ಪಣ ಮತ್ತು ನಿಮ್ನ ದರ್ಪಣಗಳ ನಡುವಣ ಯಾವುದಾದರೂ ಎರಡು ವ್ಯತ್ಯಾಸಗಳನ್ನು ಬರೆಯಿರಿ.

**IV. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **$3 \times 3 = 9$**

12. a) ಬೆಳಕಿನ ವಕ್ರೀಭವನದ ಎರಡು ನಿಯಮಗಳನ್ನು ನಿರೂಪಿಸಿ.

b) 'ವಜ್ರದ ವಕ್ರೀಭವನ ಸೂಚ್ಯಂಕ 2·42' ಈ ಹೇಳಿಕೆಯ ಅರ್ಥವನ್ನು ಬರೆಯಿರಿ.

13. ಪೀನಮಸೂರದ ಮುಂದೆ $2F_1$ ನಲ್ಲಿ ವಸ್ತುವನ್ನಿರಿಸಿದಾಗ ಉಂಟಾಗುವ ಪ್ರತಿಬಿಂಬದ ರೇಖಾಚಿತ್ರವನ್ನು ಬರೆಯಿರಿ. ರೇಖಾಚಿತ್ರದ ಸಹಾಯದಿಂದ ಪ್ರತಿಬಿಂಬದ ಸ್ಥಾನ ಮತ್ತು ಸ್ವಭಾವಗಳನ್ನು ತಿಳಿಸಿ.

[ $F_1$ : ಮಸೂರದ ಪ್ರಧಾನ ಸಂಗಮ ]

**ಅಥವಾ**

ನಿಮ್ನ ದರ್ಪಣದ ಮುಂದೆ $C$ ಮತ್ತು $F$ ಗಳ ನಡುವೆ ವಸ್ತುವನ್ನಿರಿಸಿದಾಗ ಉಂಟಾಗುವ ಪ್ರತಿಬಿಂಬದ ರೇಖಾಚಿತ್ರವನ್ನು ಬರೆಯಿರಿ. ರೇಖಾಚಿತ್ರದ ಸಹಾಯದಿಂದ ಪ್ರತಿಬಿಂಬದ ಸ್ಥಾನ ಮತ್ತು ಸ್ವಭಾವಗಳನ್ನು ತಿಳಿಸಿ.

[ $F$ : ದರ್ಪಣದ ಪ್ರಧಾನ ಸಂಗಮ; $C$ : ದರ್ಪಣದ ವಕ್ರತಾ ಕೇಂದ್ರ ]

14. ವಿದ್ಯುತ್ ಪ್ರವಾಹದಿಂದ ಸೊಲೆನಾಯ್ಡ್‌ನಲ್ಲಿ ಉಂಟಾದ ಕಾಂತಕ್ಷೇತ್ರದ ಲಕ್ಷಣಗಳನ್ನು ಪಟ್ಟಿಮಾಡಿ. ಸೊಲೆನಾಯ್ಡ್‌ನಲ್ಲಿ ಕಾಂತಕ್ಷೇತ್ರವನ್ನು ಹೆಚ್ಚುಮಾಡುವ ಎರಡು ವಿಧಾನಗಳು ಯಾವುವು ?

**V. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **$2 \times 4 = 8$**

15. a) ನಿಮ್ನ ದರ್ಪಣದ ಯಾವುದಾದರೂ ನಾಲ್ಕು ಉಪಯೋಗಗಳನ್ನು ಬರೆಯಿರಿ.

b) ಸಂಗಮ ದೂರ 10 ಸೆಂ.ಮೀ. ಇರುವ ನಿಮ್ನ ಮಸೂರದ ಪ್ರಧಾನ ಅಕ್ಷದ ಮೇಲೆ ಲಂಬವಾಗಿ ಒಂದು ವಸ್ತುವನ್ನು 15 ಸೆಂ.ಮೀ. ದೂರದಲ್ಲಿ ಇರಿಸಲಾಗಿದೆ. ಪ್ರತಿಬಿಂಬದ ದೂರವನ್ನು ಕಂಡುಹಿಡಿಯಿರಿ.

16. a) ಜೌಲನ ಉಷ್ಣೋತ್ಪಾದನಾ ನಿಯಮವನ್ನು ನಿರೂಪಿಸಿ. ಈ ನಿಯಮವನ್ನು ಅನ್ವಯಿಸಿ, ಕಾರ್ಯನಿರ್ವಹಿಸುವ ಯಾವುದಾದರೂ ಎರಡು ಸಾಧನಗಳನ್ನು ಹೆಸರಿಸಿ.

b) ವಿದ್ಯುತ್ ಉಷ್ಣೋತ್ಪಾದನಾ ಸಾಧನಗಳಲ್ಲಿ ನೈಕ್ರೋಮ್‌ನಂತಹ ಮಿಶ್ರಲೋಹಗಳನ್ನು ಉಪಯೋಗಿಸುತ್ತಾರೆ. ಏಕೆ ?

**ಅಥವಾ**

a) ಓಮ್‌ನ ನಿಯಮವನ್ನು ನಿರೂಪಿಸಿ. ಗೃಹಬಳಕೆಯ ವಿದ್ಯುತ್‌ಮಂಡಲದಲ್ಲಿ ವಿದ್ಯುತ್ ಉಪಕರಣಗಳನ್ನು ಸರಣಿ ಕ್ರಮದಲ್ಲಿ ಸಂಪರ್ಕಗೊಳಿಸುವುದಿಲ್ಲ. ಏಕೆ ?

b) ವಾಹಕವೊಂದರ ರೋಧವು ಅವಲಂಬಿಸಿರುವ ಅಂಶಗಳನ್ನು ಬರೆಯಿರಿ.

## ಭಾಗ – B

## ( ರಸಾಯನ ವಿಜ್ಞಾನ )

**VI.** **ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಪರ್ಯಾಯ ಉತ್ತರಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಒಂದು ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಡನೆ ಪೂರ್ಣ ಉತ್ತರವನ್ನು ಬರೆಯಿರಿ :** **2 × 1 = 2**

17. ತಾಮ್ರದ ಸಲ್ಫೇಟ್ ದ್ರಾವಣದಿಂದ ತಾಮ್ರವನ್ನು ಸ್ಥಾನಪಲ್ಲಟಗೊಳಿಸುವ ಲೋಹ

(A) ಪಾದರಸ

(B) ಚಿನ್ನ

(C) ಕಬ್ಬಿಣ

(D) ಬೆಳ್ಳಿ

18. ಪ್ರೊಪೇನ್ಯಾಲ್ ( Propanal ) ಅಣುರಚನೆಯಲ್ಲಿ ಕಂಡುಬರುವ ಏಕಬಂಧಗಳ ಸಂಖ್ಯೆ

(A) 8

(B) 6

(C) 7

(D) 5

**VII. ಕೆಳಗಿನ ಪ್ರಶ್ನೆಗೆ ಉತ್ತರಿಸಿ :** **1 × 1 = 1**

19. ಆಧುನಿಕ ಆವರ್ತಕ ನಿಯಮವನ್ನು ನಿರೂಪಿಸಿ.

**VIII. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **5 × 2 = 10**

20. ನೀರಿನ ವಿದ್ಯುದ್ವಿಭಜನೆಯನ್ನು ತೋರಿಸಲು ಉಪಯೋಗಿಸುವ ಉಪಕರಣಗಳ ಜೋಡಣೆಯ ಚಿತ್ರವನ್ನು ಬರೆಯಿರಿ. 'ಗ್ರಾಫೈಟ್ ದಂಡ' ವನ್ನು ಗುರುತಿಸಿ.

21. ಸೋಡಿಯಂ ಸಲ್ಫೇಟ್ ಮತ್ತು ಬೇರಿಯಂ ಕ್ಲೋರೈಡ್‌ಗಳ ನಡುವೆ ಜರುಗುವ ರಾಸಾಯನಿಕ ಕ್ರಿಯೆಯನ್ನು ದ್ವಿಸ್ಥಾನಪಲ್ಲಟ ಕ್ರಿಯೆ ಎನ್ನುತ್ತಾರೆ. ಏಕೆ ? ಈ ಕ್ರಿಯೆಯ ಸರಿದೂಗಿಸಿದ ರಾಸಾಯನಿಕ ಸಮೀಕರಣವನ್ನು ಬರೆಯಿರಿ.

**ಅಥವಾ**

ಸುಣ್ಣದ ಕಲ್ಲಿನಿಂದ (ಕ್ಯಾಲ್ಸಿಯಂ ಕಾರ್ಬೋನೇಟ್) ಸುಟ್ಟ ಸುಣ್ಣವನ್ನು ಪಡೆಯುವ ರಾಸಾಯನಿಕ ಕ್ರಿಯೆಯ ವಿಧ ಯಾವುದು ? ಈ ಕ್ರಿಯೆಗೆ ರಾಸಾಯನಿಕ ಸಮೀಕರಣವನ್ನು ಬರೆಯಿರಿ.

22. ಈ ಕೆಳಗಿನ ರಾಸಾಯನಿಕ ಸಮೀಕರಣಗಳನ್ನು ಸರಿದೂಗಿಸಿ :

i) $Fe + H_2O \longrightarrow Fe_3O_4 + H_2$

ii) $Al + Cl_2 \longrightarrow AlCl_3$

23. ಚಲುವೆ ಪುಡಿಯ ಯಾವುದಾದರೂ ಎರಡು ಉಪಯೋಗಗಳನ್ನು ಬರೆಯಿರಿ.

24. ಲೋಹಗಳು ಮತ್ತು ಅಲೋಹಗಳ ಭೌತಗುಣಗಳ ನಡುವಣ ಯಾವುದಾರೂ ಎರಡು ವ್ಯತ್ಯಾಸಗಳನ್ನು ಬರೆಯಿರಿ.

**IX. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ : $3 \times 3 = 9$**

25. ಸಾರರಿಕ್ತ ಸಲ್ಫ್ಯೂರಿಕ್ ಆಮ್ಲದೊಂದಿಗೆ ಸತುವಿನ ಚೂರುಗಳ ವರ್ತನೆ ಮತ್ತು ಉರಿಸುವಿಕೆಯ ಮೂಲಕ ಹೈಡ್ರೋಜನ್ ಅನಿಲದ ಪರೀಕ್ಷೆಯನ್ನು ತೋರಿಸುವ ಉಪಕರಣಗಳ ಜೋಡಣೆಯ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ :

i) ಸತುವಿನ ಚೂರುಗಳು

ii) ಸಾಬೂನಿನ ದ್ರಾವಣ

26. a) ತಟಸ್ಥೀಕರಣ ಕ್ರಿಯೆ ಎಂದರೇನು ? ಒಂದು ಉದಾಹರಣೆ ಕೊಡಿ.

b) $CaSO_4 . \frac{1}{2} H_2O$ ಅಣುಸೂತ್ರವನ್ನು ಹೊಂದಿರುವ ಸಂಯುಕ್ತದ ಸಾಮಾನ್ಯ ಹೆಸರೇನು ?

27. ಆಕ್ಸಿಜನ್ ಮತ್ತು ಸಲ್ಫರ್‌ಗಳನ್ನು ಆಧುನಿಕ ಆವರ್ತಕ ಕೋಷ್ಟಕದಲ್ಲಿ ಒಂದೇ ಗುಂಪಿನಲ್ಲಿಡಲು ಎರಡು ಕಾರಣಗಳನ್ನು ಬರೆಯಿರಿ. ಇವುಗಳಲ್ಲಿ ಯಾವ ಧಾತುವಿನ ಪರಮಾಣು ಗಾತ್ರವು ಹೆಚ್ಚಾಗಿದೆ ಮತ್ತು ಏಕೆ ?

(ಆಕ್ಸಿಜನ್ ಪರಮಾಣು ಸಂಖ್ಯೆ 8; ಸಲ್ಫರ್ ಪರಮಾಣು ಸಂಖ್ಯೆ 16)

**ಅಥವಾ**

ಮೆಂಡಲೀವ್‌ರ ಆವರ್ತಕ ಕೋಷ್ಟಕದ ಮಿತಿಗಳನ್ನು ಬರೆಯಿರಿ. ಸಿಲಿಕಾನ್ ಅನ್ನು ಲೋಹಾಭ ( Metalloid ) ಎಂದು ಕರೆಯುತ್ತಾರೆ. ಏಕೆ ?

**X. ಕೆಳಗಿನ ಪ್ರಶ್ನೆಗೆ ಉತ್ತರಿಸಿ : 1 × 4 = 4**

28. a) ಪರ್ಯಾಪ್ತ ಮತ್ತು ಅಪರ್ಯಾಪ್ತ ಕಾರ್ಬನ್ ಸಂಯುಕ್ತಗಳ ನಡುವಣ ಯಾವುದಾದರೂ ಎರಡು ವ್ಯತ್ಯಾಸಗಳನ್ನು ಬರೆಯಿರಿ.

b) ಈ ಕೆಳಗಿನ ಕಾರ್ಬನ್ ಸಂಯುಕ್ತಗಳ ರಚನಾ ವಿನ್ಯಾಸವನ್ನು ಬರೆಯಿರಿ :

i) ಬೆಂಜೀನ್

ii) ಬ್ಯೂಟೇನ್

**XI. ಕೆಳಗಿನ ಪ್ರಶ್ನೆಗೆ ಉತ್ತರಿಸಿ : 1 × 5 = 5**

29. a) ಸೋಡಿಯಂ ಪರಮಾಣು ಮತ್ತು ಕ್ಲೋರೀನ್ ಪರಮಾಣುಗಳ ನಡುವೆ ಅಯಾನಿಕ ಬಂಧ ಉಂಟಾಗುವಿಕೆಯನ್ನು ವಿವರಿಸಿ. (ಸೋಡಿಯಂ ಪರಮಾಣು ಸಂಖ್ಯೆ 11, ಕ್ಲೋರಿನ್ ಪರಮಾಣು ಸಂಖ್ಯೆ 17)

b) ಅಯಾನಿಕ ಸಂಯುಕ್ತಗಳ ಯಾವುದಾದರೂ ನಾಲ್ಕು ಸಾಮಾನ್ಯ ಲಕ್ಷಣಗಳನ್ನು ಪಟ್ಟಿ ಮಾಡಿ.

# ಭಾಗ – C

## ( ಜೀವ ವಿಜ್ಞಾನ )

**XII. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಪರ್ಯಾಯ ಉತ್ತರಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಒಂದು ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಡನೆ ಪೂರ್ಣ ಉತ್ತರವನ್ನು ಬರೆಯಿರಿ :** **$4 \times 1 = 4$**

30. ಸಸ್ಯಗಳಲ್ಲಿ ಕ್ಸೈಲಂನ ಪ್ರಮುಖ ಕಾರ್ಯ

(A) ನೀರಿನ ಸಾಗಾಣಿಕೆ

(B) ಆಹಾರದ ಸಾಗಾಣಿಕೆ

(C) ಅಮೈನೋ ಆಮ್ಲಗಳ ಸಾಗಾಣಿಕೆ

(D) ಆಕ್ಸಿಜನ್ ಸಾಗಾಣಿಕೆ

31. ಸಸ್ಯಗಳಲ್ಲಿ ಧನಗುರುತ್ವಾನು ವರ್ತನೆಗೆ ಒಂದು ಉದಾಹರಣೆ

(A) ಕಾಂಡದ ಬೆಳವಣಿಗೆ

(B) ಮಣ್ಣಿನ ಆಳಕ್ಕೆ ಬೇರುಗಳ ಬೆಳವಣಿಗೆ

(C) ಬಳ್ಳಿಗಳ ಕುಡಿಗಳ ಬೆಳವಣಿಗೆ

(D) ಬೇರುಗಳ ಮೇಲ್ಮುಖ ಬೆಳವಣಿಗೆ

32. ಆಹಾರ ಸರಪಳಿಯಲ್ಲಿ ಪ್ರಾಥಮಿಕ ಭಕ್ಷಕರು ಯಾವಾಗಲೂ

(A) ಮಾಂಸಾಹಾರಿಗಳು

(B) ಸಸ್ಯಾಹಾರಿಗಳು

(C) ಉನ್ನತ ಮಾಂಸಾಹಾರಿಗಳು

(D) ಉತ್ಪಾದಕರು

33. ಸಸ್ಯಗಳಲ್ಲಿ ಹಣ್ಣಾಗಿ ಬೆಳೆಯುವ ಹೂವಿನ ಭಾಗ

(A) ಪುಷ್ಪದಳ

(B) ಶಲಾಕಾಗ್ರ

(C) ಅಂಡಾಶಯ

(D) ಶಲಾಕ ನಳಿಕೆ

**XIII. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **4 × 1 = 4**

34. ಸಸ್ಯಗಳ ಬೆಳವಣಿಗೆಯನ್ನು ಪ್ರತಿಬಂಧಿಸುವ ಹಾರ್ಮೋನು ಯಾವುದು ?

35. ತಂದೆಯಿಂದ '$X$' ವರ್ಣತಂತುವನ್ನು ಪಡೆದು ಜನಿಸಿದ ಮಗುವಿನ ಲಿಂಗ ಯಾವುದು ?

36. ಇತ್ತೀಚಿನ ದಿನಗಳಲ್ಲಿ ಕ್ಲೋರೋ ಫ್ಲೋರೋ ಕಾರ್ಬನ್ ( CFC ) ಮುಕ್ತ ರೆಫ್ರಿಜಿರೇಟರ್‌ಗಳನ್ನು ತಯಾರಿಸುತ್ತಾರೆ. ಏಕೆ ?

37. 'ಜೈವಿಕ ಸಂವರ್ಧನೆ' ಎಂದರೇನು ?

**XIV. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :** **7 × 2 = 14**

38. ಜೈವಿಕ ವಿಘಟನೀಯವಲ್ಲದ ವಸ್ತುಗಳಿಂದ ಪರಿಸರದ ಮೇಲಾಗುವ ಯಾವುದಾದರೂ ಎರಡು ಪರಿಣಾಮಗಳನ್ನು ತಿಳಿಸಿ.

**ಅಥವಾ**

ತ್ಯಾಜ್ಯ ವಿಲೇವಾರಿ ಮಾಡುವಲ್ಲಿ ಉಂಟಾಗುವ ಸಮಸ್ಯೆಗಳನ್ನು ಕಡಿಮೆ ಮಾಡಲು ಇರುವ ಯಾವುದಾದರೂ ಎರಡು ವಿಧಾನಗಳನ್ನು ತಿಳಿಸಿ.

39. ಚಿಟ್ಟೆಯ ರೆಕ್ಕೆ ಹಾಗೂ ಬಾವಲಿಯ ರೆಕ್ಕೆಗಳನ್ನು ಕಾರ್ಯಾನುರೂಪಿ ಅಂಗಗಳೆಂದು ಪರಿಗಣಿಸಬಹುದೇ ? 'ಹೌದಾದರೆ' ಏಕೆ ? 'ಇಲ್ಲವಾದರೆ' ಏಕೆ ?

40. ಮಾನವನ ವಿಸರ್ಜನಾಂಗ ವ್ಯೂಹದ ರಚನೆಯನ್ನು ತೋರಿಸುವ ಚಿತ್ರವನ್ನು ಬರೆದು, 'ಮೂತ್ರನಾಳ'ವನ್ನು ಗುರುತಿಸಿ.

41. ಲಾಲಾರಸದಲ್ಲಿರುವ ಕಿಣ್ವವನ್ನು ಹೆಸರಿಸಿ. ಈ ಕಿಣ್ವದ ಕಾರ್ಯವೇನು ?

42. ಥೈರಾಕ್ಸಿನ್ ಹಾರ್ಮೋನ್‌ನ ಉತ್ಪಾದನೆಗೆ ಅಗತ್ಯವಾದ ಖನಿಜವನ್ನು ಹೆಸರಿಸಿ. ಈ ಹಾರ್ಮೋನಿನ ಕಾರ್ಯಗಳೇನು ?

43. ಒಂದು ಹೂವಿನ ನೀಳಛೇದ ನೋಟದ ಚಿತ್ರವನ್ನು ಬರೆಯಿರಿ. 'ಶಲಾಕಾಗ್ರ'ವನ್ನು ಗುರುತಿಸಿ.

44. 'ಪರಿಸರ ವ್ಯವಸ್ಥೆಯಲ್ಲಿ ಶಕ್ತಿಯ ಹರಿವು ಏಕಮುಖವಾಗಿರುತ್ತದೆ.' ಹೇಗೆ ? ವಿವರಿಸಿ.

**XV. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ : 3 × 3 = 9**

45. ಮಾನವರಲ್ಲಿ 'ಇಮ್ಮಡಿ ರಕ್ತಪರಿಚಲನೆ'ಯ ಹಂತಗಳನ್ನು ವಿವರಿಸಿ.

**ಅಥವಾ**

ಸಸ್ಯಗಳಲ್ಲಿ, ದ್ಯುತಿಸಂಶ್ಲೇಷಣೆಯಲ್ಲಿ ಜರಗುವ ಘಟನೆಗಳನ್ನು ತಿಳಿಸಿ. ಸಸ್ಯಗಳು ತ್ಯಾಜ್ಯ ಪದಾರ್ಥಗಳನ್ನು ಹೊರಹಾಕಲು ಬಳಸುವ ವಿಧಾನಗಳು ಯಾವುವು ?

46. ಸ್ತ್ರೀಯರಲ್ಲಿ ಫಲಿತಗೊಂಡ ಅಂಡವನ್ನು ಬರಮಾಡಿಕೊಳ್ಳಲು ಗರ್ಭಕೋಶವು ಹೇಗೆ ಸಿದ್ಧವಾಗುತ್ತದೆ ? ಒಂದು ವೇಳೆ ಅಂಡವು ಫಲಿತಗೊಳ್ಳದಿದ್ದರೆ ಏನಾಗುತ್ತದೆ ? ವಿವರಿಸಿ.

47. 'ಜೀವಿಯೊಂದು ತನ್ನ ಜೀವಿತ ಕಾಲದಲ್ಲಿ ಗಳಿಸಿದ ಅನುಭವಗಳು ಮುಂದಿನ ಪೀಳಿಗೆಗೆ ಆನುವಂಶೀಯವಾಗುವುದಿಲ್ಲ' ಎಂಬ ಪರಿಕಲ್ಪನೆಯನ್ನು ಒಂದು ನಿದರ್ಶನದ ಸಹಾಯದಿಂದ ವಿವರಿಸಿ.

**ಅಥವಾ**

ಶುದ್ಧ 'ಗಿಡ್ಡ' ಬಟಾಣಿ ಸಸ್ಯವನ್ನು ಶುದ್ಧ 'ಎತ್ತರ'ದ ಬಟಾಣಿ ಸಸ್ಯದೊಂದಿಗೆ ಸಂಕರಣಗೊಳಿಸಲಾಗಿದೆ. ಏಕತಳೀಕರಣದ $F_2$ ಪೀಳಿಗೆಯಲ್ಲಿ ದೊರೆಯುವ ಫಲಿತಾಂಶಗಳನ್ನು ಚಕ್ಕರ್ ಬೋರ್ಡ್‌ನಲ್ಲಿ ವ್ಯಕ್ತಪಡಿಸಿ ಮತ್ತು ದೊರೆತ ಸಸ್ಯಗಳ ವಿಧಗಳ ಅನುಪಾತವನ್ನು ತಿಳಿಸಿ.

**XVI. ಕೆಳಗಿನ ಪ್ರಶ್ನೆಗೆ ಉತ್ತರಿಸಿ :** **1 × 4 = 4**

48. ಮಾನವನ ಮಿದುಳಿನ ರಚನೆಯನ್ನು ತೋರಿಸುವ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ :

i) ಅನುಮಸ್ತಿಷ್ಕ

ii) ಮಧ್ಯ ಮಿದುಳು